ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಶಿವನಸಮುದ್ರದ ಬಳಿ ಇರುವ ಐತಿಹಾಸಿಕ ವೆಸ್ಲಿ ಸೇತುವೆಯನ್ನು ಪುನರ್ ನಿರ್ಮಾಣ ಮಾಡುವ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

674 (637) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಳ್ಳೆಗಾಲ ತಾಲ್ಲೂಕು, ಶಿವನಸಮುದ್ರದÀ ಬಳಿ ಕಾವೇರಿ ನದಿಗೆ ಅಡ್ಡಲಾಗಿ 1832ರಲ್ಲಿ ನಿರ್ಮಿಸಿದ್ದ ಶತಮಾನಗಳ ಐತಿಹಾಸಿಕ ವೆಸ್ಲಿ ಸೇತುವೆ ಕೊಚ್ಚಿ ಹೋಗಿದ್ದು, ಇದರ ಪುನರ್ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಇದಕ್ಕಾಗಿ ಅನುದಾನವನ್ನು ನಿಗಧಿಪಡಿಸಿ ಬಿಡುಗಡೆ ಮಾಡಲಾಗಿದೆಯೇ ;

(ಆ) ಈ ಸೇತುವೆಯನ್ನು ಪುನರ್ ನಿರ್ಮಾಣ ಮಾಡಿ ಪ್ರವಾಸಿ ಆಕರ್ಷಣೆ ಹಾಗೂ ಪುರಾತತ್ವ ಸ್ಮಾರಕವಾಗಿ ಉಳಿಸಿಕೊಳ್ಳಲು, ಪುನರ್ವಿಮರ್ಶಿತ ಸೂಕ್ತ ಯೋಜನೆಯನ್ನು ರೂಪಿಸಿ, ಡಿ.ಪಿ.ಆರ್. ಮಾಡಿಸಿ, ಅಗತ್ಯವಾದ ಅನುದಾನ ಬಿಡುಗಡೆ ಮಾಡಿ ಕಾಮಗಾರಿಯನ್ನು ಆರಂಭಿಸಲಾಗುವುದೇ ?